## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಂವಿಧಾನ ದಿನಾಚರಣೆಯ ಪ್ರಯುಕ್ತ "ಸಂವಿಧಾನ ಜಾಗೃತಿ ಜಾಥ" ಕಾರ್ಯಕ್ರಮಕ್ಕೆ ಪ್ರತಿ ಜಿಲ್ಲೆಗೆ ರೂ.25 ಲಕ್ಷಗಳ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಸಕಇ 264 ಎಸ್‌ಎಲ್‌ಪಿ 2023 ದಿನಾಂಕ:21-11-2023.
2. ಸರ್ಕಾರದ ಆದೇಶ ಸಂಖ್ಯೆ:ಸಕಇ 264 ಎಸ್‌ಎಲ್‌ಪಿ 2023 ದಿನಾಂಕ:14-01-2024.
3. ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:9-1-2023ರಂದು ನಡೆದ ಕಾರ್ಯಕಾರಿ ಸಮಿತಿ ಸಭೆಯ ನಡವಳಿ.

******

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರಿ ಆದೇಶದಲ್ಲಿ ದಿನಾಂಕ:09.11.2023 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದಿಸಿರುವಂತೆ, 2024ನೇ ಜನವರಿ ಮತ್ತು ಪೆಬ್ರುವರಿ ಮಾಹೆಯಲ್ಲಿ ಸಂವಿಧಾನ ದಿನಾಚರಣೆಯ ಪ್ರಯುಕ್ತ "ಸಂವಿಧಾನ ಜಾಗೃತಿ ಜಾಥ" ರಾಷ್ಟ್ರೀಯ ಮಟ್ಟದ ಸಮಾವೇಶವನ್ನು ನಡೆಸಲು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯ ಸಂಘಟನಾ ಸಮಿತಿ ಹಾಗೂ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯ ಕಾರ್ಯನಿರ್ವಹಣಾ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಸರ್ಕಾರಿ ಆದೇಶದಲ್ಲಿ ಸಂವಿಧಾನ ದಿನಾಚರಣೆಯ ಪ್ರಯುಕ್ತ "ಸಂವಿಧಾನ ಜಾಗೃತಿ ಜಾಥ" ರಾಷ್ಟ್ರೀಯ ಮಟ್ಟದ ಸಮಾವೇಶವನ್ನು ನಡೆಸಲು ರೂ.18.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ:09-01-2024ರಂದು ನಡೆದ ಕಾರ್ಯನಿರ್ವಹಣಾ ಸಮಿತಿ ಸಭೆಯ ನಡವಳಿಯಲ್ಲಿ "ಸಂವಿಧಾನ ಜಾಗೃತಿ ಜಾಥ" ಸಮಾವೇಶದ ಕಾರ್ಯಕ್ರಮವನ್ನು 03 ಭಾಗಗಳಾಗಿ ವಿಂಗಡಿಸಿ, ಅದರಲ್ಲಿ ಮೊದಲನೇ ಭಾಗದ ಕಾರ್ಯಕ್ರಮವನ್ನು

ದಿನಾಂಕ:26ನೇ ಜನವರಿ 2024 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಮೂಲಕ ಚಾಲನೆ ನೀಡುವುದರೊಂದಿಗೆ ಪ್ರಾರಂಭಿಸಲು ನಿರ್ಣಯಿಸಲಾಗಿದೆ. ಅದರಂತೆ ರೂಪುರೇಷೆಯ ಮಾರ್ಗಸೂಚಿಯೊಂದಿಗೆ ರೂ.25 ಲಕ್ಷಗಳ ಅನುದಾನವನ್ನು ಸ್ತಬ್ಧಚಿತ್ರ (Tableau) ಮೆರವಣಿಗೆ ಹಾಗೂ ಇನ್ನಿತರ ಕಾರ್ಯಕ್ರಮಕ್ಕೆ ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 264 ಎಸ್‌ಎಲ್‌ಪಿ 2023, ಬೆಂಗಳೂರು.**

**ದಿನಾಂಕ : 14 .01.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಂತೆ, ಸಂವಿಧಾನ ದಿನಾಚರಣೆಯ ಪ್ರಯುಕ್ತ ಅರಮನೆ ಮೈದಾನ ಬೆಂಗಳೂರು ಇಲ್ಲಿ ನಡೆಸಲಾಗುವ "ಸಂವಿಧಾನ ಜಾಗೃತಿ ಜಾಥ" ದ ರಾಷ್ಟ್ರೀಯ ಮಟ್ಟದ ಕಾರ್ಯಕ್ರಮದ ಸಮಾವೇಶವಕ್ಕೆ ದಿನಾಂಕ: 26ನೇ ಜನವರಿ 2024ರಂದು ಎಲ್ಲಾ ಜಿಲ್ಲಾ ಕೇಂದ್ರಗಳ ಮೂಲಕ ಚಾಲನೆ ನೀಡಲು ಉದ್ದೇಶಿಸಲಾಗಿರುವ ಸ್ತಬ್ಧಚಿತ್ರ (Tableau) ಮೆರವಣಿಗೆ ಹಾಗೂ ಇನ್ನಿತರ ಕಾರ್ಯಕ್ರಮಕ್ಕೆ ಪ್ರತಿ ಜಿಲ್ಲೆಗೆ ರೂ.25.00 ಲಕ್ಷ (ಇಪ್ಪತ್ತೈದು ಲಕ್ಷ ರೂಗಳು)ಗಳ ಅನುದಾನವನ್ನು ಕೆ.ಎಸ್.ಎಂ.ಸಿ.ಎ. ಸಂಸ್ಥೆಯ ಮೂಲಕ ಸ್ತಬ್ಧಚಿತ್ರ (Tableau) ರೂಪಿಸುವಕೊಳ್ಳುವ ಷರತ್ತಿನೊಂದಿಗೆ ಜಿಲ್ಲಾಧಿಕಾರಿಗಳು ಮತ್ತು ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರ ಜಂಟಿ ಖಾತೆಗೆ ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಇವರು ಈಗಾಗಲೇ ಕಾರ್ಯಕ್ರಮಕ್ಕೆ ಮಂಜೂರಾತಿ ನೀಡಿರುವ ರೂ.18.00ಕೋಟಿಗಳ ಅನುದಾನದಲ್ಲಿ ಬಿಡುಗಡೆ ಮಾಡಲು ಮಂಜೂರಾತಿ ನೀಡಿ ಆದೇಶಿಸಿದೆ.

ಮುಂದುವರೆದು, ಈ ಕೆಳಕಂಡ ಮಾರ್ಗಸೂಚಿಗಳಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಯಶಸ್ವಿಯಾಗಿ ಕಾರ್ಯಕ್ರಮವನ್ನು ನಿರ್ವಹಿಸಲು ತಿಳಿಸಿದೆ.

1. ಜಿಲ್ಲಾ ಉಸ್ತುವಾರಿ ಸಚಿವರು ಗಣರಾಜ್ಯೋತ್ಸವದ ಭಾಷಣದಲ್ಲಿ 26ನೇ ಜನವರಿ 2024ರ ರಂದು ಭಾರತದ ಸಂವಿಧಾನ ಮತ್ತು ಏಕತೆ ಕಾರ್ಯಕ್ರಮವನ್ನು ಆಚರಿಸುವ ಬಗ್ಗೆ ಪ್ರಸ್ತಾಪಿಸಲು ಹಾಗೂ ಏಕಕಾಲದಲ್ಲಿ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಸಂವಿಧಾನ ಜಾಗೃತಿ ಜಾಥ" ಸ್ತಬ್ಧಚಿತ್ರ (LED Mounted Tableau) ಮೆರವಣಿಗೆಗೆ ಚಾಲನೆ ನೀಡಲು ಅನುವಾಗುವಂತೆ ಹಾಗೂ ಈ ಜಾಥವು ಪೂರ್ವಪ್ರತ್ಯಯ ಮಾರ್ಗನಕ್ಷೆಯಂತೆ ಎಲ್ಲಾ ಗ್ರಾಮ ಪಂಚಾಯತ್ ಮತ್ತು ಇತರೆ ಕಚೇರಿಗಳಿಗೆ ಭೇಟಿ ನೀಡುವ ಮೂಲಕ ಜಿಲ್ಲೆಯಲ್ಲಿ ಸಂಚಾರಿಸುವಂತೆ ಕ್ರಮಕೈಗೊಳ್ಳುವುದು.
2. ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಮತ್ತು ಅಗತ್ಯವಿರುವ ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸೆಪ್ಟಂಬರ್ 2023ರಲ್ಲಿ ನಡೆದ ಸಂವಿಧಾನ ಪೀಠಿಕೆ ಒದುವ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎನ್ ಜಿ.ಒ.ಗಳು/ಸಂಘಟನೆಗಳನ್ನೊಳಗೊಂಡ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿನ ಕಾರ್ಯಕ್ರಮ ಸಮಿತಿಯನ್ನು ರಚಿಸಿಕೊಂಡು ಸಂವಿಧಾನ ಜಾಗೃತಿ ಜಾಥದ ಸ್ತಬ್ಧ ಚಿತ್ರದ

ಮೆರವಣಿಗೆಗೆ ಮಾರ್ಗವನ್ನು (Route Map) ಅಂತಿಮಗೊಳಿಸುವುದು. ಆ ಮಾರ್ಗದಲ್ಲಿ ಯಾವುದೇ ಬದಲಾವಣೆ ಇದ್ದಲ್ಲಿ ಸಮಿತಿಯಿಂದ ಮಾತ್ರ ಅಧಿಕೃತಗೊಳಿಸಬಹುದು. ನಗರಾಭಿವೃದ್ಧಿ ಇಲಾಖೆಯ ಬೆಂಬಲದೊಂದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಕಾರ್ಯಕ್ರಮವನ್ನು ನಿರ್ವಹಿಸುವುದು. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಕಛೇರಿ ಮತ್ತು ಜಿಲ್ಲಾಧಿಕಾರಿಗಳ ಕಛೇರಿಯೊಂದಿಗೆ ಒಟ್ಟಾರೆ ಕಾರ್ಯಕ್ರಮವನ್ನು ಸಮನ್ವಯಿಸಲಾಗುವುದು

3. ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿನ ಮೇಲಿನ ಸಮಿತಿಯು ಜನವರಿ 26ರಂದು ಚಾಲನೆ ನೀಡಲಿರುವ ಜಾಗೃತಿ ಜಾಥದ ಮೆರವಣಿಗೆಯು ದಿನಾಂಕ:25 ಫೆಬ್ರವರಿ 2024ರಂದು ಬೆಂಗಳೂರಿಗೆ ಆಗಮಿಸಿ ಸಂವಿಧಾನ ಜಾಗೃತಿ ಸಮಾವೇಶದಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲೆಯಲ್ಲಿನ ಎಷ್ಟು ಗ್ರಾಮ ಪಂಚಾಯತ್ ಗಳಿಗೆ ಸ್ತಬ್ಧಚಿತ್ರವು ಭೇಟಿ ನೀಡಬೇಕು ಎಂಬ ಮೆರವಣಿಗೆಗಳ ಸಂಖ್ಯೆಯನ್ನು ನಿರ್ಧರಿಸಲು ಜಿಲ್ಲಾ ಸಮಿತಿಗೆ ಸ್ವಾತಂತ್ರ್ಯವಿದೆ.

4. ಮೆರವಣಿಗೆಯು ಜಿಲ್ಲಾ ಸಮಿತಿ ಅನುಮೋದಿಸುವ ಅಥವಾ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರ ಸಹಯೋಗದೊಂದಿಗೆ ಒದಗಿಸಲಾಗುವ ಸಂವಿಧಾನ ಜಾಗೃತಿ ಜಾಥದ video clipsನ್ನು ಹೊಂದಿರುವ ಕನಿಷ್ಠ ಒಂದು LED Disply ವಾಹನವನ್ನು ಹೊಂದಿರಬೇಕು. ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವುದು ಹಾಗೂ ಭಾರತದ ಸಂವಿಧಾನ ಪೀಠಿಕೆಯ ಪ್ರತಿಗಳನ್ನು ಮೆರವಣಿಗೆಯ ಉದ್ದಕ್ಕೂ ವಿತರಿಸುವುದು.

5. ಜಿಲ್ಲಾ ಸಮಿತಿಯು ನಿರ್ಧರಿಸಿದಂತೆ, ಜಿಲ್ಲಾ ಮಟ್ಟದ ಇಲಾಖೆಗಳು ಜಿಲ್ಲಾ ಸಮಿತಿಯ ಮಾರ್ಗದರ್ಶನದಂತೆ ರೂಪಿಸುವ ಒಂದಕ್ಕಿಂತ ಹೆಚ್ಚು ಸ್ತಬ್ಧಚಿತ್ರಗಳು ಮೆರವಣಿಗೆಯಲ್ಲಿ ಭಾಗವಹಿಸಬಹುದು. ಮೆರವಣಿಗೆಯ ರಚನೆ ಮತ್ತು ಸಂಯೋಜನೆ, ಮಾರ್ಗ, ತಂಗುವಿಕೆ ಮತ್ತು ವಸತಿ, ವಿಶ್ರಾಂತಿ, ಸುರಕ್ಷತೆ ಇತ್ಯಾದಿಗಳನ್ನು ಜಿಲ್ಲಾ ಸಮಿತಿಯು ರೂಪಿಸುವುದು.

6. ಮೆರವಣಿಗೆಯಲ್ಲಿ ಈ ಕೆಳಗಿನ ವಿಷಯಗಳನ್ನು ಒಳಗೊಂಡ ಕನಿಷ್ಠ ಒಂದು ಸ್ತಬ್ಧಚಿತ್ರ ಇರತಕ್ಕದ್ದು. (These are only inclusive and not exhaustive.) ಈ ವಿಷಯಗಳನ್ನು ಸಾಧ್ಯವಾದಷ್ಟು ಸೃಜನಶೀಲವಾಗಿಸಲು ಸಮಿತಿಯು ಸಂಪೂರ್ಣ ಸ್ವತಂತ್ರವಾಗಿದೆ. ಕೆಳಗಿನ ವಿಷಯಗಳ ಕುರಿತು ಮಾತನಾಡಲು ಭಾಷಣಕಾರರನ್ನು ಪ್ರೋತ್ಸಾಹಿಸುವುದು, ನಾಟಕ ಮತ್ತು ರಂಗಭೂಮಿ ಕಲಾವಿದರು ಸಹ ಪ್ರದರ್ಶನ ನೀಡಬಹುದು.

| | |
|---|---|
| i. | ಭಾರತದ ಸಂವಿಧಾನದ ಪೀಠಿಕೆ |
| ii. | ನ್ಯಾಯ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಮತ್ತು ಡಾ. ಬಿ. ಆರ್.ಅಂಬೇಡ್ಕರ್ ರವರ ಪರಿಕಲ್ಪನೆ |
| iii. | ಬಸವಣ್ಣನವರ ವಚನಗಳು ಮತ್ತು ಭಾರತದ ಸಂವಿಧಾನದಲ್ಲಿ ವಚನಗಳ ಪ್ರಸ್ತುತತೆ. |
| iv. | ಜಿಲ್ಲೆಯ ಸ್ಥಳೀಯ ಐತಿಹಾಸಿಕ ವ್ಯಕ್ತಿಗಳು, ಸಾಹಿತ್ಯ ದಿಗ್ಗಜರು ಸೇರಿದಂತೆ ಪ್ರಮುಖ ವ್ಯಕ್ತಿಗಳು ಹಾಗೂ ಸ್ಥಳೀಯ |

| | |
|---|---|
| | ಕಲೆ ಮತ್ತು ಸಂಸ್ಕೃತಿ ಇತ್ಯಾದಿಗಳನ್ನು ಒಳಗೊಂಡಿರುವ ಸ್ತಬ್ಧಚಿತ್ರ |
| v. | ಅನುಚ್ಛೇದ 41: " ರಾಜ್ಯವು ತನ್ನ ಆರ್ಥಿಕ ಸಾಮರ್ಥ್ಯ ಮತ್ತು ಅಭಿವೃದ್ಧಿಯ ಪರಿಮಿತಿಯಲ್ಲಿ ಉದ್ಯೋಗ ಶಿಕ್ಷಣ ಹಕ್ಕುಗಳನ್ನು ಪಡೆಯಲು ಹಾಗೂ ನಿರುದ್ಯೋಗ, ವೃದ್ಧಾಪ್ಯ , ಅನಾರೋಗ್ಯ ಮತ್ತು ಅಸಮರ್ಥತೆಯ ಸಂದರ್ಭಗಳಲ್ಲಿ ಸಹಾಯ ನೀಡಲು ಪರಿಣಾಮಕಾರಿ ಅವಕಾಶಗಳನ್ನು ಕಲ್ಪಿಸುವುದಲ್ಲದೆ ಇನ್ನಿತರ ಅರ್ಹ ಬೇಡಿಕೆಗಳ ಪ್ರಕರಣಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಐದು ಖಾತರಿಗಳನ್ನು ಜಾರಿಗೊಳಿಸಿದೆ.(ಸಾರ್ವತಿಕ ಮೂಲ ಆದಾಯ ಪರಿಕಲ್ಪನೆ) |

7. ಮೆರವಣಿಗೆಯು ಸಾಧ್ಯವಾದಷ್ಟು ಗ್ರಾಮಗಳ ಮೂಲಕ ಹಾದು ಹೋಗತಕ್ಕದ್ದು ಮತ್ತು ತಾಲ್ಲೂಕಿನ ಗಡಿಯಲ್ಲಿ ಅದನ್ನು ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಶಾಸಕರು/ಎಂ.ಎಲ್.ಸಿ/ಸಂಸತ್ ಸದಸ್ಯರು ಹಾಗೂ ಸ್ಥಳೀಯ ಸಂಸ್ಥೆಗಳ ಮತ್ತಿತರ ಚುನಾಯಿತ ಪ್ರತಿನಿಧಿಗಳು ಸ್ವಾಗತಿಸಬೇಕು. ಪ್ರತಿಯೊಂದು ಗ್ರಾಮ ಪಂಚಾಯತಿಯಲ್ಲಿಯೂ ಅದು ತಂಗಬೇಕು ಮತ್ತು ಸದರಿ ಸ್ಥಳದಲ್ಲಿ ಸಂವಿಧಾನ ಮತ್ತು ಸಂಬಂಧಿತ ಇತರ ವಿಷಯಗಳ ಕುರಿತಂತೆ ಸ್ಪರ್ಧೆಗಳು ಆಯೋಜಿಸತಕ್ಕದ್ದು, ಗ್ರಾಮ ಪಂಚಾಯತಿಯು ತನ್ನ ವ್ಯಾಪ್ತಿಯಲ್ಲಿ ಮೆರವಣಿಗೆಗೆ ಎಲ್ಲಾ ರೀತಿಯ ಬೆಂಬಲವನ್ನು ನೀಡತಕ್ಕದ್ದು ಮೆರವಣಿಗೆಯು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಾಗುವ ಸಂದರ್ಭದಲ್ಲಿಯೂ ಸಹ ಇದು ಅನ್ವಯವಾಗುತ್ತದೆ ಮತ್ತು ಮೆರವಣಿಗೆಯು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಾಗುವ ಸಂದರ್ಭದಲ್ಲಿ ಸ್ಥಳೀಯ ಸಂಸ್ಥೆಗಳು ಎಲ್ಲಾ ರೀತಿಯ ಬೆಂಬಲವನ್ನು ನೀಡತಕ್ಕದ್ದು. ಸರ್ಕಾರೇತರ ಸಂಸ್ಥೆಗಳು/ನಾಗರೀಕರಿಂದ ಮೆರವಣಿಗೆಗೆ ಯಾವುದೇ ಬೆಂಬಲ/ಸಹಾಯವು ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಅಥವಾ ನಗರ ಸ್ಥಳೀಯ ಸಂಸ್ಥೆಗಳ ಮೂಲಕವೇ ಒದಗಿಸತಕ್ಕದ್ದು ಮೆರವಣಿಗೆಯು ಸಾಗುವ ಸಂದರ್ಭದಲ್ಲಿ ಸಂಬಂಧಪಟ್ಟ ಇಲಾಖೆಗಳ ಸರ್ಕಾರಿ ಅಧಿಕಾರಿಗಳು ಪರಿಶಿಷ್ಟಜಾತಿ/ಪಂಗಡಗಳ ಜನರ ಮನೆಗಳಿಗೆ ಭೇಟಿ ನೀಡತಕ್ಕದ್ದು ಮತ್ತು ಇದ್ದುವರೆವಿಗೂ ಸರ್ಕಾರದ ಐದು ಖಾತರಿಗಳ ವ್ಯಾಪ್ತಿಗೆ ಒಳಪಡದಿರುವಂತಹ ವ್ಯಕ್ತಿಗಳಿಗೆ ಒಂದು ವೇಳೆ ಅವರು ಅರ್ಹರೆಂದು ಕಂಡು ಬಂದಲ್ಲಿ ಸದರಿ ಸೌಲಭ್ಯವನ್ನು ಪಡೆಯಲು ಅವರಿಗೆ ನೆರವು ನೀಡತಕ್ಕದ್ದು

8. ಜಿಲ್ಲಾ ಆಡಳಿತವು ಈ ಕಾರ್ಯಕ್ರಮಕ್ಕಾಗಿ ಸಮಾಜ ಕಲ್ಯಾಣ ಇಲಾಖೆಯು ಪ್ರತಿ ಜಿಲ್ಲೆಗೆ ಪ್ರತ್ಯೇಕವಾಗಿ ನೀಡಲಿರುವ ರೂ.25 ಲಕ್ಷಗಳ ಅನುದಾನವನ್ನು ಹೊರತುಪಡಿಸಿ ವಿವಿಧ ಇಲಾಖೆಗಳ ಅನುದಾನವನ್ನು ನಗರ ಸ್ಥಳೀಯ ಸಂಸ್ಥೆ ಹಾಗೂ ಗ್ರಾಮೀಣಾಭಿವೃದ್ಧಿ ಸ್ಥಳೀಯ ಸಂಸ್ಥೆಗಳ ಲೆಕ್ಕಶೀರ್ಷಿಕೆಯಡಿ ಲಭ್ಯವಿರುವ ಅನುದಾನವನ್ನು ಬಳಸಬೇಕು.

9. ಈ ಕಾರ್ಯಕ್ರಮವು ಭಾರತದ ಸಂವಿಧಾನದ ಆಚರಣೆ ಮತ್ತು ಅದರ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ. ಆದ್ದರಿಂದ, ಎಲ್ಲಾ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳು ಹಾಗೂ ಖಾಸಗಿ ಸಂಸ್ಥೆಗಳ ಅಧಿಕಾರಿ/ಸಿಬ್ಬಂದಿಗಳು ತಮ್ಮ ನಿಯಮಿತ

ಕೆಲಸದ ಮೇಲೆ ಪರಿಣಾಮ ಬೀರದಂತೆ ಸಾಧ್ಯವಾದಷ್ಟು ಕಾರ್ಯಕ್ರಮದಲ್ಲಿ ಭಾಗವಹಿಸುವುದನ್ನು ಖಚಿತಪಡಿಸಿಕೊಳ್ಳಬೇಕು.

10. ಈ ಕಾರ್ಯಕ್ರಮದ ಮೌಲ್ಯಮಾಪನವನ್ನು ಭವ್ಯತೆ, ನಾವೀನ್ಯತೆ, ಭಾಗವಹಿಸುವಿಕೆ, ಪರಿಣಾಮಕಾರಿತ್ವ ಮತ್ತು ಮಾಧ್ಯಮ/ನಾಗರಿಕ ಸಮಾಜದ ಪ್ರತಿಕ್ರಿಯೆಯ ಅಂಶಗಳ ಮೇಲೆ ನಡೆಸಿ ಮೊದಲ ಮೂರು ಜಿಲ್ಲೆಗಳಿಗೆ ಫೆಬ್ರುವರಿ 25ರ ಕಾರ್ಯಕ್ರಮದಲ್ಲಿ ಮಾನ್ಯ ಮುಖ್ಯಮಂತ್ರಿಗಳಿಂದ ಪ್ರಶಸ್ತಿ ಪ್ರಧಾನ ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/1/24

(ಎಲ್ ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
7. ಎಲ್ಲಾ ನಿಗಮ/ಸಂಸ್ಥೆ/ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರು, ನಿರ್ದೇಶಕರು.
8. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು .
9. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು
10. ಎಲ್ಲಾ ಜಿಲ್ಲಾ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
11. ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಗಳು:

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

2. ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಮಾನ್ಯ ಲೋಕೋಪಯೋಗಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐ.ಟಿ & ಬಿ.ಟಿ ಸಚಿವರ, ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
11. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ, ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
13. ಮಾನ್ಯ ಯುವಜನ ಸೇವಾ, ಕ್ರೀಡಾ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಮಾನ್ಯ ಸಹಕಾರ ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
15. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
16. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.

***************